ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/44/ಸ್ವಾ.ಅ.ಮ/2022-23 ದಿನಾಂಕ: 25.07.2022

# ಸುತ್ತೋಲೆ

ವಿಷಯ: 75ನೇ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ "ಹರ್ ಘರ್ ತಿರಂಗಾ" ಅಭಿಯಾನವನ್ನು ಹಮ್ಮಿಕೊಳ್ಳುವ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ/99/ಯುಎನ್ಇ/2021 ಬೆಂಗಳೂರು, ದಿನಾಂಕ:02.07.2022.

* * * * * *

ಅಸಂಖ್ಯಾತ ಹೋರಾಟ, ತ್ಯಾಗ, ಬಲಿದಾನಗಳ ಕಾರಣದಿಂದ ದಾಸ್ಯದ ಸಂಕೋಲೆಯಿಂದ ಬಿಡುಗಡೆಯಾದ ಭಾರತಾಂಬೆಗೆ ಪ್ರಾಪ್ತಿಯಾದ ಸ್ವತಂತ್ರ್ಯಕ್ಕೆ ಈಗ ಅಮೃತ್ ಮಹೋತ್ಸವ ಸಂಭ್ರಮ. ಈ ಸಂದರ್ಭದಲ್ಲಿ ಅದಕ್ಕೆ ಕಾರಣರಾದ ಎಲ್ಲರನ್ನು ಸದಾ ಸ್ಮರಿಸುವುದು ಹಾಗೂ ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. "ಇತಿಹಾಸ ಮರೆತವರು ಇತಿಹಾಸ ಸೃಷ್ಟಿಸಲಾರರು" ಎಂಬ ಮಾತಿನಂತೆ ಇಂದಿನ ನಮ್ಮ ಸಂಭ್ರಮಕ್ಕೆ ತಳಪಾಯವಾಗಿ, ಮೆಟ್ಟಿಲುಗಳಾಗಿ ತಮ್ಮ ಜೀವ-ಜೀವನ ತ್ಯಾಗ ಮಾಡಿದ ಎಲ್ಲರನ್ನು ಮರೆಯದೇ ಸದಾ ಸ್ಮರಿಸುತ್ತಾ ಭವ್ಯ ಭಾರತವನ್ನು ಕಟ್ಟುವಲ್ಲಿ ನಮ್ಮ ಜವಾಬ್ದಾರಿಯುತ ಪಾತ್ರವನ್ನು ನಿರ್ವಹಿಸಬೇಕಾಗಿದೆ.

ದೇಶಾದ್ಯಂತ ಭಾರತ ಸ್ವಾತಂತ್ರ್ಯದ 75ರ ಸಂಭ್ರಮವನ್ನು ವೈವಿಧ್ಯಮಯವಾಗಿ ಆಚರಿಸಲಾಗುತ್ತಿದೆ. ಈ ಸಂಭ್ರಮದ ಒಂದು ಭಾಗವಾಗಿ ಕೇಂದ್ರ ಸರ್ಕಾರವು "ಹರ್ ಘರ್ ತಿರಂಗಾ" ಎಂಬ ಘೋಷವಾಕ್ಯದೊಂದಿಗೆ 2022ರ ಆಗಸ್ಟ್ 11 ರಿಂದ 17 ರವರೆಗೆ ದೇಶದ ಪ್ರತಿ ಮನೆಮನೆಯಲ್ಲೂ ರಾಷ್ಟ್ರ ಧ್ವಜವನ್ನು ಹಾರಿಸಿ, ದೇಶ ಭಕ್ತಿ ಬಿಂಬಿಸುವ ಮೂಲಕ ನಮ್ಮ ರಾಷ್ಟ್ರ ಪ್ರೇಮವನ್ನು ಅಭಿವ್ಯಕ್ತಗೊಳಿಸಿ ದಾಖಲಿಸುವಂತೆ ಕರೆ ನೀಡಿ ಅಭಿಯಾನವನ್ನು ಹಮ್ಮಿಕೊಂಡಿದೆ ಎಂದು ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಜಾಲತಾಣದಲ್ಲಿ (amritmahotsav.nic.in) "ಹರ್ ಘರ್ ತಿರಂಗಾ" ದ ಅಡಿಯಲ್ಲಿ ರಾಷ್ಟ್ರಧ್ವಜಕ್ಕೆ ಸಂಬಂಧಿಸಿದಂತೆ ಬ್ಯಾನರ್ ಮತ್ತು ಪೋಸ್ಟರ್‌ಗಳ ಮಾದರಿಗಳು (Creatives) ಲಭ್ಯವಿದ್ದು, ಅವುಗಳ ಉಪಯೋಗವನ್ನು ಪಡೆದುಕೊಳ್ಳುವಂತೆಯೂ ಮತ್ತು ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ / ಅನುದಾನ ರಹಿತ ಪದವಿಗಳು ಸದರಿ ಅಭಿಯಾನವನ್ನು ಯಶಸ್ವಿಗೊಳಿಸಲು ಮತ್ತು "ಹರ್ ಘರ್ ತಿರಂಗಾ" ಅಭಿಯಾನ ಕುರಿತು ದಿನಾಂಕ:11.08.2022 ರಿಂದ 17.08.2022 ರವರೆಗೆ ಬೋಧಕರು / ಬೋಧಕೇತರರು / ವಿದ್ಯಾರ್ಥಿಗಳು ತಮ್ಮ ತಮ್ಮ ಮನೆಯ ಮೇಲೆ ರಾಷ್ಟ್ರಧ್ವಜವನ್ನು ಕುಟುಂಬದೊಂದಿಗೆ ಧ್ವಜಾರೋಹಣ ಮಾಡುವಂತೆ ಹಾಗೂ ಸ್ಥಳೀಯ ಭಾಷೆಯಲ್ಲಿ

..2

ಸ್ಟ್ಯಾಂಡಿಸ್, ಕರಪತ್ರ, ಬ್ಯಾನರ್ ಇತ್ಯಾದಿಗಳನ್ನು ಪ್ರಮುಖ ಸ್ಥಳಗಳಲ್ಲಿ ಬಿತ್ತರಿಸುವುದು, ರಾಜ್ಯ ಸರ್ಕಾರದ ವೆಬ್‌ಸೈಟ್ ಹಾಗೂ ಸಾಮಾಜಿಕ ಮಾಧ್ಯಮಗಳ ಅಂಗಗಳನ್ನು ಉಪಯೋಗಿಸಿಕೊಳ್ಳುವುದು, ಮಹಲುಗಳು, ರೈಲು ನಿಲ್ದಾಣ, ಬಸ್ ನಿಲ್ದಾಣ, ಉದ್ಯಾನಗಳು, ಹೋಟೆಲ್‌ಗಳು ಅಲ್ಲದೆ ಪ್ರತಿ ವಾರ್ಡುಗಳಲ್ಲಿ ಸಾಮಾಜಿಕ ಸಂಪರ್ಕ ಹೊಂದಿರುವ ಕಛೇರಿಗಳ ಮುಂದೆ ವ್ಯಾಪಕ ಪ್ರಚಾರ ಮಾಡಲು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಪ್ರತಿ ತರಗತಿಗಳು ನಡೆಯುವ ಸಮಯದಲ್ಲಿ ತಿಳಿಸುವುದು ಮತ್ತು ಸೂಚನಾ ಫಲಕಗಳಲ್ಲಿ ಈ ಕುರಿತು ಅಳವಡಿಸುವುದು, ಆಯಾ ಕಾಲೇಜುಗಳ ಖಾಸಗಿ ವಾಹನ / ಬಸ್ಸುಗಳ ಮೇಲೆ ಧ್ವಜವನ್ನು ಅಳವಡಿಸಲು ಸಂಸ್ಥೆಯ ಮುಖ್ಯಸ್ಥರು ಹಾಗೂ ಚಾಲಕರಿಗೆ ಅರಿವು ಮೂಡಿಸಲು ಸೂಕ್ತ ಕ್ರಮವಹಿಸುವಂತೆ ಹಾಗೂ "ಹರ್ ಘರ್ ತಿರಂಗಾ" ಅಭಿಯಾನದ ಕುರಿತು ಕೈಗೊಂಡ ಕ್ರಮದ ಬಗ್ಗೆ ಪ್ರತಿ ವಾರದ ಕೊನೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವೆಬ್‌ಸೈಟ್ kanbhavbir@gmail.com ಗೆ ಅಪ್‌ಲೋಡ್ ಮಾಡುವ ಮೂಲಕ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಸೂಚಿಸಲಾಗಿರುತ್ತದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ:

1) ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3) ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು–01.
2) ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು–01.
3) ಕಛೇರಿ ಪ್ರತಿ.